## ರಾಜ್ಯದ ಶಾಸಕರಿಗೆ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಸಲಹೆ

# ಶಾಸಕಾಂಗ ಸಾಮರ್ಥ್ಯ ವೃದ್ಧಿಸಿ

**ಬೆಂಗಳೂರು:** ರಾಜ್ಯ ವಿಧಾನಮಂಡಲದ ಇತಿಹಾಸದಲ್ಲಿ ಚರಿತ್ರಾರ್ಹ ಎನಿಸುವ ಕಾರ್ಯಕ್ರಮಕ್ಕೆ ಶುಕ್ರವಾರದಂದು ಉಭಯ ಸದನಗಳ ಸದಸ್ಯರೂ ಸಾಕ್ಷಿಯಾಗಿದ್ದು, ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ಪ್ರಜಾಪ್ರಭುತ್ವ: ಸಂಸದೀಯ ಮೌಲ್ಯಗಳ ರಕ್ಷಣೆ ಕುರಿತು ಶಾಸಕರಿಗೆ ಪಾಠ ಮಾಡಿದರು.

ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ ವಿಧಾನಸಭೆಯ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಮಾತನಾಡಿದ ಸ್ಪೀಕರ್ ಓಂ ಬಿರ್ಲಾ ಅವರು, ಚುನಾಯಿತ ಪ್ರತಿನಿಧಿಗಳು ತಮ್ಮ ಶಿಸ್ತು ಮತ್ತು ಸಭ್ಯ ನಡವಳಿಕೆ ಮೂಲಕ ಘನತೆ ಎತ್ತಿ ಹಿಡಿಯಬೇಕು. ಖಾಸಗಿ ಜೀವನದಲ್ಲಿಯೂ ಅವರ ನಡತೆ, ವ್ಯವಹಾರಗಳು ಸದನದ ಘನತೆ ಹೆಚ್ಚಿಸಲು ಜನರಿಗೆ ಮಾದರಿಯಾಗಿರಬೇಕು ಎಂದರು.

ಅಮೃತ ಮಹೋತ್ಸವದ ಈ ಸಂದರ್ಭದಲ್ಲಿ ಇದುವರೆಗೆ ನಾವೆಲ್ಲರೂ ಅನುಸರಿಸಿರುವ ಸಂಸದೀಯ ರೂಪ ಆಡಳಿತ ಮಾರ್ಗದಲ್ಲಿ ಪ್ರಜಾಪ್ರಭುತ್ವ ಮೌಲ್ಯ ಕಾಪಾಡುವಲ್ಲಿ ಎಷ್ಟರ ಮಟ್ಟಿಗೆ ಯಶಸ್ವಿಯಾಗಿದ್ದೇವೆ ಎಂಬ ಚಿಂತನೆ ನಡೆಸಬೇಕಿದೆ. ಪ್ರಜಾಪ್ರಭುತ್ವ ಸಂಸ್ಥೆಗಳನ್ನು ಜನರಿಗೆ ಇನ್ನಷ್ಟು ಉತ್ತರದಾಯಿಯನ್ನಾಗಿ ಮಾಡಬೇಕು. ಆಡಳಿತವು ಜನರ ಭಾವನೆ, ಆಕಾಂಕ್ಷೆಯೊಂದಿಗೆ ಹೊಂದಿಕೆಯಾಗುತ್ತಿದೆಯೇ ? ಎಂಬುದನ್ನು ಮರುಪರಿಶೀಲಿಸಿಕೊಳ್ಳಬೇಕು ಎಂದರು.

**ಶಾಸಕಾಂಗ ಪ್ರಜಾಪ್ರಭುತ್ವದ ಆತ್ಮ:** ದೇಶಕ್ಕಾಗಿ ನೀತಿ ಮತ್ತು ಕಾನೂನುಗಳನ್ನು ರೂಪಿಸುವ ಜವಾಬ್ದಾರಿ ಶಾಸಕಾಂಗಗಳ ಹೆಗಲ ಮೇಲಿದೆ. ಶಾಸಕಾಂಗಗಳು ಪ್ರಜಾಪ್ರಭುತ್ವದ ಆತ್ಮ. ಪ್ರಜಾಪ್ರಭುತ್ವದ ತತ್ವ, ಮೌಲ್ಯಗಳನ್ನು ಶ್ರದ್ಧೆಯಿಂದ ಪಾಲಿಸಬೇಕು. ಈ ವ್ಯವಸ್ಥೆಯನ್ನು ಜನರಿಗೆ ಹೆಚ್ಚು ಪಾರದರ್ಶಕ, ಉತ್ತರದಾಯಕವಾಗಿ ಮಾಡುವಂತೆ ನೋಡಿಕೊಳ್ಳಬೇಕು. ಅಂತಿಮವಾಗಿ ಇಲ್ಲಿ ರೂಪುಗೊಂಡ ಕಾನೂನಿನ ಬಗ್ಗೆ ಯಾರೂ ಬೆರಳೆತ್ತಿ ತೋರುವಂತಿರಬಾರದು. ಇದಕ್ಕಾಗಿ ಶಾಸಕರ ಸಾಮರ್ಥ್ಯ, ಕೌಶಲ್ಯ ಹೆಚ್ಚಿಸಲು ಶಾಸಕಾಂಗಗಳು ಸಮಗ್ರ ಸಾಮರ್ಥ್ಯ ವೃದ್ಧಿ ಕ್ರಿಯಾ ಯೋಜನೆ ರೂಪಿಸಬೇಕು. ಸದನದ ಅಮೂಲ್ಯ ಸಮಯ ವ್ಯರ್ಥವಾಗದಂತೆ ನೋಡಿಕೊಳ್ಳಬೇಕು ಎಂದು ಓಂ ಬಿರ್ಲಾ ಪ್ರತಿಪಾದಿಸಿದರು



### ಬಾವುಟ ಪ್ರದರ್ಶನ

ಓಂ ಬಿರ್ಲಾ ಅವರು ಹಿಂದಿಯಲ್ಲಿ ಭಾಷಣ ಆರಂಭಿಸುತ್ತಿದ್ದಂತೆಯೇ ಕನ್ನಡ ಬಾವುಟ ಹಿಡಿದು ಎದ್ದು ನಿಂತ ಜೆಡಿಎಸ್‌ನ ಅನ್ನದಾನಿ, ಹಿಂದಿ ಹೇರಿಕೆ ಸಹಿಸುವುದಿಲ್ಲ, ಕನ್ನಡದಲ್ಲಿ ಮಾತನಾಡಿ ಎಂದು ಆಗ್ರಹಿಸಿದರು.

### ಮಹನೀಯರ ಸ್ಮರಣೆ

ಸ್ಪೀಕರ್ ಓಂ ಬಿರ್ಲಾ ಅವರು ತಮ್ಮ ಭಾಷಣದ ಆರಂಭದಲ್ಲಿಯೇ ವಿಧಾನಸೌಧ ಕಟ್ಟಿಸಿದ ಕೆಂಗಲ್ ಹನುಮಂತಯ್ಯ, ಬೆಂಗಳೂರು ನಿರ್ಮಾತೃ ಕೆಂಪೇಗೌಡ, ಅನುಭವ ಮಂಟಪದ ರೂವಾರಿ ಬಸವೇಶ್ವರರನ್ನು ಸ್ಮರಿಸಿದರು.

### ಸಂಸತ್ ಭವನಕ್ಕೆ ಅನುಭವ ಮಂಟಪ ಹೆಸರಿಡಿ

ಮೇಲ್ಮನೆ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ದಿಲ್ಲಿಯಲ್ಲಿ ನಿರ್ಮಿಸುತ್ತಿರುವ ನೂತನ ಸಂಸತ್ ಭವನಕ್ಕೆ ಅನುಭವ ಮಂಟಪ ಹೆಸರಿಡಲು ಓಂ ಬಿರ್ಲಾಗೆ ಮನವಿಪತ್ರ ಸಲ್ಲಿಸಿದರು.

ಹೊಸ ದಿಗಂತ
25 Sep 2021




ಮಾಜಿ ಸಿಎಂ ಯಡಿಯೂರಪ್ಪಗೆ ಅತ್ಯುತ್ತಮ ಶಾಸಕ ಪ್ರಶಸ್ತಿಯನ್ನು ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ಶುಕ್ರವಾರ ಪ್ರದಾನ ಮಾಡಿದರು. ಉಭಯ ಸದನಗಳ ಮುಖ್ಯಸ್ಥರಾದ ವಿಶ್ವೇಶ್ವರ ಹೆಗಡೆ ಕಾಗೇರಿ, ಬಸವರಾಜ ಹೊರಟ್ಟಿ, ಸಿಎಂ ಬಸವರಾಜ ಬೊಮ್ಮಾಯಿ ಇದ್ದರು.